ಕರ್ನಾಟಕ ವಿಧಾನ ಪರಿಷತ್

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ	:	1502
ಸದಸ್ಯರ ಹೆಸರು	:	ಶ್ರೀ ಬಸವರಾಜ ಪಾಟೀಲ್ ಇಟಗಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸುವ ದಿನಾಂಕ	:	18.03.2021

ಕ್ರ ಸಂ:	ಪ್ರಶ್ನೆ	ಉತ್ತರ
ಅ)	ರಾಯಚೂರು ಜಿಲ್ಲೆ ದೇವದುರ್ಗ ತಾಲ್ಲೂಕಿನ ತಿಂತಿಣಿ ಬ್ರಿಡ್ಜ್ ಹತ್ತಿರ (Balancing Reservoir) ಸಮತೋಲನಾ ಜಲಾಶಯ ನಿರ್ಮಾಣದ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ;	ಬಂದಿದೆ.
ಆ)	ಬಂದಿದ್ದಲ್ಲಿ, ಎಷ್ಟು ಟಿ.ಎಂ.ಸಿ. ನೀರಿನ ಸಂಗ್ರಹಣೆ ಆಗುತ್ತದೆ;	ಪ್ರಸ್ತಾಪಿತ ರಾಯಚೂರು ಜಿಲ್ಲೆ ದೇವದುರ್ಗ ತಾಲ್ಲೂಕಿನ ತಿಂತಿಣಿ ಬ್ರಿಡ್ಜ್ ಹತ್ತಿರ (Balancing Reservoir) ಸಮತೋಲನಾ ಜಲಾಶಯ ನಿರ್ಮಾಣದ ಪ್ರಸ್ತಾವನೆ ಪ್ರಾಥಮಿಕ ತನಿಖಾ ಹಂತದಲ್ಲಿದ್ದು, ವಿವರವಾದ ಅನ್ವೇಷಣೆ ಹಾಗೂ ಸರ್ವೆ ಕಾರ್ಯ ಕೈಗೊಂಡ ನಂತರ ನಿರ್ದಿಷ್ಟ ನೀರಿನ ಸಂಗ್ರಹಣಾ ವಿವರಗಳು ಲಭ್ಯವಾಗಲಿವೆ. ಪ್ರಸ್ತಾವನೆ ಕುರಿತಂತೆ ವಿವರವಾದ ಯೋಜನಾ ವರದಿಯನ್ನು ತಯಾರಿಸಲು ಕೃಷ್ಣಾ ಭಾಗ್ಯ ಜಲ ನಿಗಮದಡಿ ಕ್ರಮ ವಹಿಸಲಾಗುತ್ತಿದೆ. ಪ್ರಸ್ತಾವನೆಗೆ ವಿವರವಾದ ಯೋಜನಾ ವರದಿ ತಯಾರಿಸಿದ ನಂತರ ಸಕ್ಷಮ ಪ್ರಾಧಿಕಾರಗಳ ತಿರುವಳಿ ಪಡೆದು ಅಗತ್ಯ ನೀರಿನ ಲಭ್ಯತೆ/ಹಂಚಿಕೆ ಹಾಗೂ ಅನುದಾನದ ಲಭ್ಯತೆಗೆ ಅನುಗುಣವಾಗಿ ಮುಂದಿನ ಕ್ರಮಗಳನ್ನು ಕೈಗೊಳ್ಳಲಾಗುವುದು.
ಇ)	ಈ ಕಾಮಗಾರಿಯನ್ನು ಯಾವಾಗ ಕೈಗೆತ್ತಿಕೊಳ್ಳಲಾಗುವುದು?	

ಸಂಖ್ಯೆ: ಜಸಂಇ 45 ಡಬ್ಲ್ಯೂಬಿಎಂ 2021

(ಬಿ.ಎಸ್.ಯಡಿಯೂರಪ್ಪ)
ಮುಖ್ಯಮಂತ್ರಿ